**Bangalore**
**Regional News**
**03.06.2024 / 14.30 hrs**

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ವಿಧಾನ ಪರಿಷತ್ ಆರು ಸ್ಥಾನಗಳಿಗೆ ಇಂದು ಚುನಾವಣೆ; ಮತದಾನ ಪ್ರಗತಿಯಲ್ಲಿ

೨. ಜೂನ್ ೧೩ ರ ವಿಧಾನ ಪರಿಷತ್ ಚುನಾವಣೆ; ಕಾಂಗ್ರೆಸ್, ಬಿಜೆಪಿ, ಜೆಡಿಎಸ್ ಅಭ್ಯರ್ಥಿಗಳಿಂದ ನಾಮಪತ್ರ ಸಲ್ಲಿಕೆ

೩. ಲೋಕಸಭಾ ಚುನಾವಣೆ; ನಾಳೆ ನಡೆಯಲಿರುವ ಮತ ಎಣಿಕೆಗೆ ಚುನಾವಣಾ ಆಯೋಗ ಸಕಲ ಸಿದ್ಧತೆ

೪. ೧೩೩ ವರ್ಷಗಳಲ್ಲೇ ಗರಿಷ್ಠ ಮಳೆ ದಾಖಲಿಸಿದ ಬೆಂಗಳೂರು

<><*<><>*><>

ಕರ್ನಾಟಕ ವಿಧಾನಪರಿಷತ್‌ನ ಶಿಕ್ಷಕರ ಮತ್ತು ಪದವೀಧರ ಕ್ಷೇತ್ರಗಳ ಚುನಾವಣೆಯ ಮತದಾನ ಪ್ರಗತಿಯಲ್ಲಿದೆ. ಒಟ್ಟು ಆರು ಸ್ಥಾನಗಳಿಗಾಗಿ ಈ ಚುನಾವಣೆ ನಡೆಯುತ್ತಿದೆ. ೧೨ ಗಂಟೆ ವೇಳೆಗೆ ಬಂದ ಅಂಕಿ - ಅಂಶಗಳ ಪ್ರಕಾರ, ಈಶಾನ್ಯ ಪದವೀಧರರ ಕ್ಷೇತ್ರ ಶೇಕಡ ೨೬, ನೈಋತ್ಯ ಪದವೀಧರ ಕ್ಷೇತ್ರ ಶೇಕಡ ೩೩.೪೯, ಬೆಂಗಳೂರು ಪದವೀಧರ ಕ್ಷೇತ್ರ ೨೮.೩೭, ಆಗ್ನೇಯ ಶಿಕ್ಷಕರ ಕ್ಷೇತ್ರ ೨೮.೨೮, ನೈಋತ್ಯ ಶಿಕ್ಷಕರ ಕ್ಷೇತ್ರ ೩೭.೭೯, ದಕ್ಷಿಣ ಶಿಕ್ಷಕರ ಕ್ಷೇತ್ರ ೩೮.೩೨ ರಷ್ಟು ಮತದಾನವಾಗಿದೆ. ಸಂಜೆ ೪ ಗಂಟೆಯವರೆಗೆ ಮತದಾನ ನಡೆಯಲಿದೆ.

<><*<><>*><>

ವಿಧಾನ ಪರಿಷತ್ತಿನ ಈಶಾನ್ಯ ಕರ್ನಾಟಕ ಪದವೀಧರ ಕ್ಷೇತ್ರದ ಚುನಾವಣೆಗೆ ಇಂದು ಬಳ್ಳಾರಿ ಜಿಲ್ಲೆಯಲ್ಲಿ ಬಿರುಸಿನ ಮತದಾನ ನಡೆಯಿತು. ಬೆಳಗ್ಗೆ ೮ ರಿಂದ ಮತದಾನ ಆರಂಭಗೊಂಡಿತು. ಬಹುತೇಕ ಮತಗಟ್ಟೆಗಳಲ್ಲಿ ಮತದಾರರ ಸಾಲು ಕಂಡು ಬಂತು. ಸಂಜೆ ೪ ರವರೆಗೆ ಮತದಾನ ನಡೆಯಲಿದೆ. ಮೊದಲ ಬಾರಿಗೆ ಹೋಬಳಿ ಮಟ್ಟದಲ್ಲಿ ಮತಗಟ್ಟೆ ತೆರೆದ ಕಾರಣ ಗ್ರಾಮೀಣ ಪ್ರದೇಶದ ಜನತೆ ಹರ್ಷ ವ್ಯಕ್ತಪಡಿಸಿದ್ದಾರೆ. ಬಳ್ಳಾರಿ ಜಿಲ್ಲೆಯಲ್ಲಿ ಮತದಾನಕ್ಕಾಗಿ ಬಳ್ಳಾರಿ ನಗರದಲ್ಲಿ ೧೦ ಮತಗಟ್ಟೆಗಳು, ಕುರುಗೋಡು, ಸಿರುಗುಪ್ಪ, ಸಂಡೂರು ಮತ್ತು ಕಂಪ್ಲಿ ತಾಲೂಕು ಕೇಂದ್ರ, ಹೋಬಳಿಗಳಾದ ಮೋಕಾ, ರೂಪನಗುಡಿ, ಕೋಳೂರು, ಚೋರನೂರು, ತೋರಣಗಲ್ಲು,

ತೆಕ್ಕಲಕೋಟೆ, ಕರೂರಿನಲ್ಲಿ ತಲಾ ಒಂದು ಮತಗಟ್ಟೆಯಲ್ಲಿ ಮತದಾನಕ್ಕೆ ವ್ಯವಸ್ಥೆ ಮಾಡಲಾಗಿತ್ತು. ಬಳ್ಳಾರಿ ಜಿಲ್ಲೆಯಲ್ಲಿ ೧೪ ಸಾವಿರದ ೯೮೧ ಪುರುಷರು, ೯ ಸಾವಿರದ ೧೯೮ ಮಹಿಳೆಯರು ಮತ್ತು ೪ ಜನ ಇತರೆ ಸೇರಿದಂತೆ ಒಟ್ಟು ೨೪ ಸಾವಿರದ ೧೮೩ ಮತದಾರರಿದ್ದಾರೆ. ಮತದಾನ ಪ್ರಕ್ರಿಯೆಯಲ್ಲಿ ೧೪೦ ಸಿಬ್ಬಂದಿ ಪಾಲ್ಗೊಂಡಿದ್ದಾರೆ. ಸ್ಪರ್ಧಾ ಕಣದಲ್ಲಿ ಬಿಜೆಪಿಯಿಂದ ಮಾಜಿ ವಿಧಾನಪರಿಷತ್ ಸದಸ್ಯ ಅಮರನಾಥ ಪಾಟೀಲ್, ಕಾಂಗ್ರೆಸ್‌ನಿಂದ ಹಾಲಿ ವಿಧಾನಪರಿಷತ್ ಸದಸ್ಯ ಚಂದ್ರಶೇಖರ್ ಪಾಟೀಲ್, ನಾರಾ ಪ್ರತಾಪ್ ರೆಡ್ಡಿ ಸೇರಿದಂತೆ ೧೯ ಮಂದಿ ಹುರಿಯಾಳುಗಳು ಇದ್ದಾರೆ.

<><*<><>*><>

ಕರ್ನಾಟಕ ವಿಧಾನ ಸಭೆಯಿಂದ ವಿಧಾನ ಪರಿಷತ್‌ಗೆ ದ್ವೈವಾರ್ಷಿಕ ಚುನಾವಣೆಯು ಜೂನ್ ೧೩ ರಂದು ನಡೆಯಲಿದೆ. ೧೧ ಸ್ಥಾನಗಳಿಗೆ ನಡೆಯುವ ಈ ಚುನಾವಣೆಗೆ ನಾಮಪತ್ರ ಸಲ್ಲಿಸಲು ಇಂದು ಕೊನೆಯ ದಿನವಾಗಿದೆ. ಜೆಡಿಎಸ್ ಅಭ್ಯರ್ಥಿಯಾಗಿ ಜವರಾಯಿಗೌಡ ಇಂದು ನಾಮಪತ್ರ ಸಲ್ಲಿಸಿದರು. ಅದೇ ರೀತಿ ಬಿಜೆಪಿ ಅಭ್ಯರ್ಥಿಗಳಾಗಿ ಎಂ.ಜಿ.ಮುಳೆ, ಎನ್. ರವಿಕುಮಾರ್ ಮತ್ತು ಸಿ.ಟಿ.ರವಿ ನಾಮಪತ್ರ ಸಲ್ಲಿಸಿದರು. ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳಾಗಿ ವಸಂತ ಕುಮಾರ್, ಜಗದೇವ ಗುತ್ತೇದಾರ್, ಭೋಸರಾಜು, ಬಿಲ್ಕಿಸ್ ಬಾನೋ, ಐವನ್ ಡಿಸೋಜಾ ಮತ್ತು ಗೋವಿಂದರಾಜು ನಾಮಪತ್ರ ಸಲ್ಲಿಸಿದ್ದಾರೆ.

<><*<><>*><>

೨೦೨೪ರ ಲೋಕಸಭಾ ಚುನಾವಣೆಯ ಮತಎಣಿಕಾ ಕಾರ್ಯಕ್ಕೆ ಒಂದು ದಿನ ಬಾಕಿ ಉಳಿದಿದ್ದು, ಚುನಾವಣಾ ಆಯೋಗ ಇಂದು ಸುದ್ದಿಗೋಷ್ಠಿ ನಡೆಸಿತು. ಸುದ್ದಿಗೋಷ್ಠಿಯಲ್ಲಿ ಮುಖ್ಯ ಚುನಾವಣಾ ಆಯುಕ್ತ ರಾಜೀವ್‌ಕುಮಾರ್ ಹಾಗೂ ಚುನಾವಣಾ ಆಯುಕ್ತರಾದ ಜ್ಞಾನೇಶ್ ಕುಮಾರ್ ಮತ್ತು ಸುಖ್‌ಬೀರ್ ಸಿಂಗ್ ಸಂಧೂ ಪಾಲ್ಗೊಂಡಿದ್ದರು. ಈ ವೇಳೆ ಮಾತನಾಡಿದ ರಾಜೀವ್ ಕುಮಾರ್, ೨೦೨೪ರ ಸಾರ್ವತ್ರಿಕ ಚುನಾವಣೆಯ ಮತದಾನದಲ್ಲಿ ಸಾರ್ವಜನಿಕರು, ಮಹಿಳೆಯರು, ೮೫ ವರ್ಷ ಮೇಲ್ಪಟ್ಟವರು ಹಾಗೂ ವಿಶೇಷಚೇತನರು ದಾಖಲೆಯ ಸಂಖ್ಯೆಯಲ್ಲಿ ಪಾಲ್ಗೊಂಡು ಚುನಾವಣೆಯನ್ನು ಯಶಸ್ವಿಯಾಗಿಸಿದ್ದಾರೆ. ಈ ಚುನಾವಣೆಯ ಮೂಲಕ ಭಾರತ ೬೪೨ ಮಿಲಿಯನ್ ಹೆಮ್ಮೆಯ ಮತದಾರರನ್ನು ಹೊಂದಿರುವ ದೇಶ ಎಂಬ ದಾಖಲೆ ನಿರ್ಮಿಸಿದೆ ಎಂದರು. ಮತದಾನ ಪೂರ್ಣಗೊಂಡ ಬಳಿಕ ಆಯೋಗ ಈ ರೀತಿಯ ಸುದ್ದಿಗೋಷ್ಠಿ ನಡೆಸುತ್ತಿರುವುದು ಚುನಾವಣಾ ಇತಿಹಾಸದಲ್ಲೇ ಮೊದಲ ಬಾರಿಯಾಗಿದೆ.

<><*<><>*><>

ಲೋಕಸಭಾ ಚುನಾವಣೆ ಹಾಗೂ ಶೋರಾಪುರ ವಿಧಾನಸಭೆಯ ಉಪ ಚುನಾವಣೆಯ ಮತ ಎಣಿಕೆ ಕಾರ್ಯ ನಾಳೆ ನಡೆಯಲಿದೆ. ಇದಕ್ಕಾಗಿ ರಾಜ್ಯ ಚುನಾವಣಾ ಆಯೋಗ ಸಕಲ ಸಿದ್ಧತೆ ಕೈಗೊಂಡಿದೆ. ಬೆಳಿಗ್ಗೆ ೮ ಗಂಟೆಯಿಂದ ಮತ ಎಣಿಕೆ ಕಾರ್ಯ ಆರಂಭವಾಗಲಿದೆ. ರಾಜ್ಯದ ೨೮ ಲೋಕಸಭಾ ಕ್ಷೇತ್ರಗಳ ವ್ಯಾಪ್ತಿಯ ತಲಾ ಒಂದು ಕೇಂದ್ರದಲ್ಲಿ ಮತ ಎಣಿಕೆ ಕಾರ್ಯ ನಡೆಯಲಿದೆ. ಇದಕ್ಕಾಗಿ ೧೩ ಸಾವಿರಕ್ಕೂ ಹೆಚ್ಚು ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ಸಿಸಿಟಿವಿ ಕ್ಯಾಮೆರಾಗಳು ಮತ ಎಣಿಕೆ ಕಾರ್ಯವನ್ನು ಸೆರೆಹಿಡಿಯಲಿವೆ. ಬಿಗಿ ಭದ್ರತೆ ಕೈಗೊಳ್ಳಲಾಗಿದೆ.

<><*<><>*><>

ದಾವಣಗೆರೆ ಲೋಕಸಭಾ ಕ್ಷೇತ್ರದ ಮತ ಎಣಿಕೆ ಕಾರ್ಯವು ದಾವಣಗೆರೆ ವಿಶ್ವವಿದ್ಯಾನಿಲಯದ ಶಿವಗಂಗೋತ್ರಿಯಲ್ಲಿ ನಾಳೆ ಬೆಳಗ್ಗೆ ೮ ಗಂಟೆಯಿಂದ ನಡೆಯಲಿದೆ ಎಂದು ಜಿಲ್ಲಾಧಿಕಾರಿ ಡಾ. ಎಂ.ವಿ.ವೆಂಕಟೇಶ್ ತಿಳಿಸಿದ್ದಾರೆ. ದಾವಣಗೆರೆ ಲೋಕಸಭಾ ಕ್ಷೇತ್ರ ೮ ವಿಧಾನಸಭಾ ಕ್ಷೇತ್ರಗಳನ್ನು ಒಳಗೊಂಡಿದ್ದು, ಪ್ರತಿ ಕ್ಷೇತ್ರದಲ್ಲಿ ೧೪ ಟೇಬಲ್‌ಗಳಲ್ಲಿ ಎಣಿಕೆ ನಡೆಯಲಿದೆ. ಎಣಿಕೆಗಾಗಿ ವೀಕ್ಷಕರು, ಸಹಾಯಕರನ್ನು ನೇಮಕ ಮಾಡಲಾಗಿದೆ. ಎಣಿಕೆ ತಂಡಗಳನ್ನು ರಚಿಸಿ, ವಿಧಾನಸಭಾ ಕ್ಷೇತ್ರಗಳನ್ನು ಹಂಚಿಕೆ ಮಾಡಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

<><*<><>*><>

ಲೋಕಸಭಾ ಚುನಾವಣೆಯ ಮತ ಎಣಿಕೆಯ ಕ್ಷಣ ಕ್ಷಣದ ಮಾಹಿತಿ ನೀಡಲು ಬೆಂಗಳೂರು ಆಕಾಶವಾಣಿ ಸುದ್ದಿ ವಿಭಾಗ, ಸಕಲ ಸಿದ್ಧತೆ ಕೈಗೊಂಡಿದೆ. ನಾಳೆ ನಮ್ಮ ಪ್ರತಿನಿಧಿಗಳು ನೇರವಾಗಿ ಮತ ಎಣಿಕೆ ಕೇಂದ್ರಗಳಿಂದ ವರದಿ ಮಾಡಲಿದ್ದಾರೆ. ಬೆಳಗ್ಗೆ ೯ ಗಂಟೆಯಿಂದ ಆರಂಭವಾಗಿ ಪ್ರತಿ ಗಂಟೆಗೊಮ್ಮೆ ಸುದ್ದಿ ಮುಖ್ಯಾಂಶಗಳು ಹಾಗೂ ವಿಶೇಷ ವಾರ್ತಾ ಪ್ರಸಾರ ಬಿತ್ತರಗೊಳ್ಳಲಿದೆ. ಸುದ್ದಿ ವಿಭಾಗ ಚುನಾವಣಾ ಫಲಿತಾಂಶ ಕುರಿತಾದ ವಿಶೇಷ ವಿಶ್ಲೇಷಣೆಗಳನ್ನು ಬೆಳಗ್ಗೆ ೧೧.೦೫ ರಿಂದ ೧೨ ಹಾಗೂ ಮಧ್ಯಾಹ್ನ ೩.೧೫ ರಿಂದ ೪.೩೦ ರವರೆಗೆ ಪ್ರಸಾರ ಮಾಡಲಿದೆ. ಈ ವಿಶೇಷ ಕಾರ್ಯಕ್ರಮಗಳು ರಾಜ್ಯದ ಎಲ್ಲಾ ಬಾನುಲಿ ಕೇಂದ್ರಗಳ ಮೂಲಕ ೯೧೨ ಕಿಲೋ ಹರ್ಟ್ಸ್ ತರಾಂಗತರಗಳಲ್ಲಿ ಬಿತ್ತರಗೊಳ್ಳಲಿವೆ.

<><*<><>*><>

ಬೆಂಗಳೂರಿನಲ್ಲಿ ನಿನ್ನೆ ಒಂದೇ ದಿನದಲ್ಲಿ ೧೧೧.೧ ಮಿಲಿಮೀಟರ್ ನಷ್ಟು ಮಳೆಯಾಗಿದ್ದು ೧೩೩ ವರ್ಷಗಳ ದಾಖಲೆಯನ್ನು ಮುರಿದಿದೆ. ೧೮೯೧ ರ ಜೂನ್ ೧೬ ರಂದು ೧೧೦.೩ ಮಿಲಿಮೀಟರ್ ಮಳೆ ದಾಖಲೆ ಬರೆದಿತ್ತು. ಮಳೆಯಿಂದಾಗಿ ನೂರಕ್ಕೂ ಹೆಚ್ಚು ಮರಗಳು ಧರೆಗುರುಳಿದ ಪರಿಣಾಮ ಆಸ್ತಿ ನಷ್ಟ ಸಂಭವಿಸಿದ್ದು, ಜನಜೀವನ ಅಸ್ತವ್ಯಸ್ತವಾಗಿದೆ. ರಸ್ತೆಗಳಲ್ಲಿ ತುಂಬಿ ಹರಿಯುತ್ತಿರುವ ನೀರಿನಿಂದಾಗಿ ಪ್ರಯಾಣಿಕರಿಗೆ ತೀವ್ರ ತೊಂದರೆಯಾಯಿತು. ವಿದ್ಯುತ ಕಂಬಗಳು ಹಾಗೂ ಟ್ರಾನ್ಸ್‌ಪಾರ್ಮರ್ ಗಳು ರಿಪೇರಿಯಾಗಿ ಕೆಲೆವೆಡೆ ವಿದ್ಯುತ್ ಅಡಚಣೆಯಾಗಿದೆ. ಮಹಾತ್ಮಗಾಂಧಿ ರಸ್ತೆಯಲ್ಲಿನ ಟ್ರಿನಿಟಿ ಸರ್ಕಲ್ ಬಳಿಯಿರುವ ಮೆಟ್ರೊ ಟ್ರೇನ್ ಸಂಚರಿಸುವ ಟ್ರ್ಯಾಕ್ಸ್ ಮೇಲೆ ಮರ ಉರುಳಿದ್ದರಿಂದಾಗಿ ಕಳೆದ ರಾತ್ರಿ ರೈಲು ಸಂಚಾರವನ್ನು ಸ್ಥಗಿತಗೊಳಿಸಲಾಗಿತ್ತು. ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಉಪಮುಖ್ಯಮಂತ್ರಿ ಹಾಗೂ ಬೆಂಗಳೂರು ಉಸ್ತುವಾರಿ ಸಚಿವ ಡಿ.ಕೆ ಶಿವಕುಮಾರ್, ಮಳೆ ಬಾಧಿತ ಪ್ರದೇಶಗಳಲ್ಲಿ ಸೂಕ್ತ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಪರಿಹಾರ ಕ್ರಮಗಳ ಕುರಿತಂತೆ ಇಂದು ಸಭೆ ನಡೆಸಲಾಗುವುದು ಎಂದು ತಿಳಿಸಿದರು.

<><*<><>*><>

ಆಕಾಶವಾಣಿ ದ್ವಿಭಾಷಾ ನೇರ ಫೋನ್‌ಇನ್ ಕಾರ್ಯಕ್ರಮ ಪಬ್ಲಿಕ್ ಸ್ಪೀಕ್‌ನಡಿ ಬಿಸಿಗಾಳಿ ಪರಿಸ್ಥಿತಿಯ ಸಂದರ್ಭದಲ್ಲಿ ಕೈಗೊಳ್ಳಬೇಕಾದ ಸುರಕ್ಷಾ ಕ್ರಮಗಳ ಕುರಿತ ಚರ್ಚೆ ಇಂದು ರಾತ್ರಿ ೯.೩೦ಕ್ಕೆ ಪ್ರಸಾರವಾಗಲಿದೆ. ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸದಸ್ಯ ಡಾ. ಕೃಷ್ಣ ಎಸ್. ವತ್ಸಾ ಹಾಗೂ ಏಮ್ಸ್‌ನ ಔಷಧಿ ವಿಭಾಗದ ಡಾ. ಪಿಯೂಶ್ ರಂಜನ್ ಚರ್ಚೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ಬಿಸಿಗಾಳಿ ಪರಿಸ್ಥಿತಿಯ ಸಂದರ್ಭದಲ್ಲಿ ಕೈಗೊಳ್ಳಬೇಕಾದ ಅಗತ್ಯ ಕ್ರಮಗಳ ಕುರಿತಾಗಿ ಶ್ರೋತೃಗಳಿಗೆ ಪ್ರಶ್ನೆ ಕೇಳಿ ಉತ್ತರ ಪಡೆಯುವ ಅವಕಾಶವಿರುತ್ತದೆ. ಇದಕ್ಕಾಗಿ ಇಂದು ರಾತ್ರಿ ೯.೩೦ರ ನಂತರ ೦೧೧-೨೩೪೨೧೦೫೦ ಮತ್ತು ೦೧೧-೨೩೩೧೪೪೪೪ ದೂರವಾಣಿ ಸಂಖ್ಯೆಗಳಿಗೆ ಕರೆ ಮಾಡಿ ಅಥವಾ ವಾಟ್ಸ್‌ಪ್ ಸಂಖ್ಯೆ ೯೨೮೯೦೯೪೦೪೪ ಗೆ ಸಂಪರ್ಕಿಸಿ ಪ್ರಶ್ನೆಗಳನ್ನು ಕೇಳಬಹುದು. ಈ ನೇರ ಪ್ರಸಾರ ಆಕಾಶವಾಣಿ ಗೋಲ್ಡ್ ಚಾನೆಲ್ ಮತ್ತು ಹೆಚ್ಚುವರಿ ತರಂಗಾಂತರಗಳಲ್ಲಿ ಲಭ್ಯವಿರುತ್ತದೆ. ಇದಲ್ಲದೇ ನ್ಯೂಸ್ ಆನ್ ಏರ್ ಡಾಟ್ ಜಿಓವಿ ಡಾಟ್ ಇನ್ ಜಾಲತಾಣ ಮತ್ತು ನ್ಯೂಸ್ ಆನ್ ಏರ್ ಅಫಿಶಿಯಲ್ ಯುಟ್ಯೂಬ್ ಚಾನೆಲ್‌ನಲ್ಲಿಯೂ ಕಾರ್ಯಕ್ರಮ ಲಭ್ಯವಿರುತ್ತದೆ.

<><*<><>*><>

ಪ್ರಧಾನಿ ನರೇಂದ್ರ ಮೋದಿ ಅವರ ನೂರು ದಿನಗಳ ಕಾರ್ಯಕ್ರಮವು ರಾಜಕೀಯ ತಂತ್ರದ ಭಾಗವಾಗಿದೆ. ಜನರ ಮನಸ್ಥಿತಿಯನ್ನು ಸಜ್ಜು ಮಾಡುವ ವ್ಯಾಖ್ಯಾನ ಬಿಟ್ಟರೆ, ಇದರಲ್ಲಿ ಬೇರೇನೂ ಇಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಾವು ಸಹ ರಾಜಕೀಯ ತಂತ್ರ ಹೊಂದಿರುವುದಾಗಿ ತಿಳಿಸಿದ ಅವರು, ಪ್ರತಿಯೊಂದು ಪಕ್ಷವು ಒಂದೊಂದು ತಂತ್ರ ಅನುಸರಿಸುತ್ತವೆ. ಮತಗಟ್ಟೆ ಸಮೀಕ್ಷೆಗಳು ಸುಳ್ಳಾಗಲಿವೆ. ಐ.ಎನ್.ಡಿ.ಐ.ಎ ಒಕ್ಕೂಟ ಬಹುಮತ ಪಡೆಯುವ ಮೂಲಕ ಸರ್ಕಾರ ರಚಿಸಲಿದೆ ಎಂದು ಭರವಸೆ ವ್ಯಕ್ತಪಡಿಸಿದರು.

<><*<><>*><>

ಚಾಲಕನ ನಿಯಂತ್ರಣ ತಪ್ಪಿ ಖಾಸಗಿ ಸ್ಲೀಪರ್ ಬಸ್ ಪಲ್ಟಿಯಾಗಿ ಪ್ರಯಾಣಿಕರೊಬ್ಬರು ಸಾವನ್ನಪ್ಪಿರುವ ಘಟನೆ ಯಾದಗಿರಿ ಜಿಲ್ಲೆಯ ಶಹಾಪುರ ತಾಲೂಕಿನ ಹತ್ತಿಗುಡೂರು ಗ್ರಾಮದ ಸಮೀಪ ನಿನ್ನೆ ರಾತ್ರಿ ನಡೆದಿದೆ. ಕಲಬುರಗಿಯಿಂದ ಬೆಂಗಳೂರಿಗೆ ಹೊರಟಿದ್ದ ಖಾಸಗಿ ಬಸ್, ಯಾದಗಿರಿ ಜಿಲ್ಲೆಯ ಶಹಾಪುರ ಮಾರ್ಗವಾಗಿ ಹತ್ತಿಗುಡೂರು ಗ್ರಾಮದ ಸೇತುವೆ ಬಳಿ ಸಂಚರಿಸುವಾಗ ನಿಯಂತ್ರಣ ತಪ್ಪಿ ಪಲ್ಟಿಯಾಗಿದೆ. ಬಸ್‌ನಲ್ಲಿದ್ದ ೩೯ ಪ್ರಯಾಣಿಕರ ಪೈಕಿ ಕಲಬುರಗಿ ಜಿಲ್ಲೆಯ ಹಳೆ ಸುಲ್ತಾನಪುರದ ೩೫ ವರ್ಷದ ಮೌನೇಶ್ ಸ್ಥಳದಲ್ಲಿಯೇ ಅಸುನೀಗಿದ್ದಾರೆ. ಇತರೆ ೭ ಪ್ರಯಾಣಿಕರು ಗಾಯಗೊಂಡಿದ್ದಾರೆ. ಗಾಯಾಳುಗಳನ್ನು ಶಹಾಪುರ ತಾಲೂಕು ಆಸ್ಪತ್ರೆಗೆ ದಾಖಲಿಸಲಾಗಿದೆ. ಶಹಾಪುರ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

<><*<><>*><>

ಕಂದಾಯ ಇಲಾಖೆಯು ರಾಜ್ಯದಲ್ಲಿ ಸರ್ಕಾರಿ ಆಸ್ತಿಗಳ ಕಾವಲಿಗೆ ಲ್ಯಾಂಡ್ ಬೀಟ್ ವ್ಯವಸ್ಥೆ ಜಾರಿಗೆ ತಂದಿದೆ. ಪ್ರತಿ ಮೂರು ತಿಂಗಳಿಗೊಮ್ಮೆ ಎಲ್ಲಾ ಜಿಲ್ಲೆಗಳ ಮೌಲ್ಯಮಾಪನ ನಡೆಸಲಾಗುತ್ತದೆ. ಸದರಿ ಮೌಲ್ಯ ಮಾಪನದಲ್ಲಿ ಈ ಬಾರಿ ಕೋಲಾರ ಜಿಲ್ಲೆಯು ಇತರೆ ಎಲ್ಲಾ ಜಿಲ್ಲೆಗಳಿಗಿಂತ ಮುಂಚೂಣಿಯಲ್ಲಿದೆ ಎಂದು ಜಿಲ್ಲಾಧಿಕಾರಿ ಅಕ್ರಂ ಪಾಷ ತಿಳಿಸಿದ್ದಾರೆ. ಒಟ್ಟಾರೆ ಜಿಲ್ಲೆಯಲ್ಲಿ ೩೪ ಸಾವಿರದ ೩೭೫ ಅರ್ಜಿಗಳನ್ನು ಸ್ವೀಕರಿಸಿ, ಶೇ. ೭೧.೭೧ ರಷ್ಟು ಸರ್ಕಾರಿ ಜಮೀನು, ಕೆರೆ, ಕುಂಟೆಗಳು, ಗೋಮಾಳಗಳು ಮುಂತಾದ ಸರ್ಕಾರಿ ಆಸ್ತಿ ವಿವರಗಳನ್ನು ಆಪ್‌ನಲ್ಲಿ ದಾಖಲಿಸಿ, ರಾಜ್ಯಕ್ಕೆ ಮಾದರಿಯಾಗಿದೆ ಎಂದು ಹೇಳಿದ್ದಾರೆ. ಸರ್ಕಾರಿ ಆಸ್ತಿಗಳ ಸಂರಕ್ಷಣೆ ಮಾಡಲು ಸರ್ಕಾರ ಹೊಸ ತಂತ್ರಾಂಶವನ್ನು ಅಭಿವೃದ್ಧಿಪಡಿಸಿದೆ. ಈ ತಂತ್ರಾಂಶದ ಮೂಲಕ ಗ್ರಾಮ ಆಡಳಿತಾಧಿಕಾರಿಗಳು, ಸರ್ಕಾರಕ್ಕೆ ಸೇರಿದ ಎಲ್ಲಾ ಜಮೀನುಗಳಿಗೆ ಜಿಯೋ ಫೆನ್ಸಿಂಗ್ ಮಾಡುತ್ತಾರೆ. ಈ ಆಪ್ ಮೂಲಕ ಜಿಯೋ ಫೆನ್ಸಿಂಗ್ ಮಾಡಿ, ಒತ್ತುವರಿ ಮಾಡಿದ್ದಲ್ಲಿ ಅಂತಹ ಆಸ್ತಿಗಳ ವಿವರ

ಲಭ್ಯವಾಗುತ್ತದೆ ಎಂದು ಜಿಲ್ಲಾಧಿಕಾರಿ ಅಕ್ರಂ ಪಾಷ ತಿಳಿಸಿದ್ದಾರೆ. ಆಪ್ ಮೂಲಕ ಎಲ್ಲಾ ಸರ್ಕಾರಿ ಜಮೀನು, ಜಾಗಗಳನ್ನು ಸರ್ವೆ ಮಾಡಿ ಜಿಯೋ ಫೆನ್ಸಿಂಗ್ ಮಾಡುವ ಮೂಲಕ ದತ್ತಾಂಶ ಸಂಗ್ರಹಕ್ಕೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ತಿಳಿಸಿದರು.

<><*<><>*><>

ದೇಶಾದ್ಯಂತ ಎಲ್ಲ ಟೋಲ್ ಪ್ಲಾಜಾಗಳಲ್ಲಿ ವಾಹನ ಟೋಲ್ ಶುಲ್ಕವನ್ನು ಶೇಕಡ ೫ರಷ್ಟು ಹೆಚ್ಚಳ ಮಾಡಲಾಗಿದೆ ಎಂದು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ತಿಳಿಸಿದೆ. ಸಾಮಾನ್ಯವಾಗಿ ಪ್ರತಿವರ್ಷ ಏಪ್ರಿಲ್ ೧ ರಿಂದಲೇ ವಾರ್ಷಿಕ ಶುಲ್ಕ ಹೆಚ್ಚಳ ಮಾಡಲಾಗುತ್ತದೆ. ಆದರೆ ಈ ಬಾರಿ ಲೋಕಸಭಾ ಚುನಾವಣೆಯ ಪ್ರಕ್ರಿಯೆ ಮುಗಿಯುವವರೆಗೆ ಟೋಲ್ ಶುಲ್ಕಗಳಲ್ಲಿ ಹೆಚ್ಚಳ ಮಾಡಬಾರದು ಎಂದು ಚುನಾವಣಾ ಆಯೋಗ ತಿಳಿಸಿತ್ತು. ಈ ಹಿನ್ನೆಲೆಯಲ್ಲಿ ಚುನಾವಣೆ ಮುಗಿದ ಬಳಿಕ ಇಂದಿನಿಂದ ಆದೇಶ ಜಾರಿಗೆ ತರಲಾಗಿದೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>